# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1627 |
| ಮಾನ್ಯ ಸದಸ್ಯರ ಹೆಸರು | ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ) (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 18.03.2026 |
| ಉತ್ತರಿಸುವ ಸಚಿವರು | ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಕೊಡಗು ಜಿಲ್ಲೆಯಲ್ಲಿನ ಪಶು ಆಸ್ಪತ್ರೆಗಳಲ್ಲಿ ಪಶು ವೈದ್ಯರು ಮತ್ತು ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ವೈದ್ಯರು ಮತ್ತು ಸಿಬ್ಬಂದಿಗಳ ನೇಮಕಾತಿಗೆ ಕ್ರಮಕೈಗೊಳ್ಳಲಾಗಿದೆಯೇ; (ಸಂಪೂರ್ಣ ವಿವರ ನೀಡುವುದು) | ಕೊಡಗು ಜಿಲ್ಲೆಯಲ್ಲಿನ ಪಶು ಆಸ್ಪತ್ರೆಗಳಲ್ಲಿ ಪಶು ವೈದ್ಯರು ಮತ್ತು ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.<br><br>ಪಶು ಆಸ್ಪತ್ರೆಗಳಲ್ಲಿ ಪಶು ವೈದ್ಯರು ಮತ್ತು ಸಿಬ್ಬಂದಿಗಳ ವಿವರಗಳು ಕೆಳಕಂಡಂತೆ ಇರುತ್ತದೆ. |

| ವೃಂದ | ಮಂಜೂರು | ಭರ್ತಿ | ಗುತ್ತಿಗೆ/ ಹೊರಗುತ್ತಿಗೆ | ಒಟ್ಟು ಖಾಲಿ |
|---|---|---|---|---|
| ಪಶುವೈದ್ಯರು | 49 | 13 | 5 | 31 |
| ಸಹಾಯಕ ಸಿಬ್ಬಂದಿಗಳು | 242 | 37 | 52 | 153 |
| **ಒಟ್ಟು** | **291** | **50** | **57** | **184** |

ಪಶುವೈದ್ಯರ ಮತ್ತು ಸಿಬ್ಬಂದಿಗಳ ನೇಮಕಾತಿಗೆ ಕೈಗೊಂಡಿರುವ ಕ್ರಮಗಳ ವಿವರಗಳು ಕೆಳಕಂಡಂತೆ ಇರುತ್ತದೆ.

400 ಪಶುವೈದ್ಯಾಧಿಕಾರಿಗಳ ಖಾಯಂ ಹುದ್ದೆಗಳನ್ನು ಭರ್ತಿ ಮಾಡಲು ಕರ್ನಾಟಕ ಲೋಕಸೇವಾ ಆಯೋಗದಿಂದ ನೇಮಕಾತಿ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ ಮತ್ತು ಹೆಚ್ಚುವರಿಯಾಗಿ 400 ಪಶುವೈದ್ಯಾಧಿಕಾರಿ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳುವ ಪ್ರಸ್ತಾವನೆಯು ಆರ್ಥಿಕ ಇಲಾಖೆಯ ಹಂತದಲ್ಲಿ ಪರಿಶೀಲನೆಯಲ್ಲಿರುತ್ತದೆ.

ಪಶುವೈದ್ಯಕೀಯ ಪರೀಕ್ಷಕರ 300 ಹುದ್ದೆಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡುವ ಪ್ರಸ್ತಾವನೆಯು ಆರ್ಥಿಕ ಇಲಾಖೆಯ ಹಂತದಲ್ಲಿ ಪರಿಶೀಲನೆಯಲ್ಲಿರುತ್ತದೆ.

<table>
<tr>
<td>ಆ</td>
<td>ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಆಸ್ಪತ್ರೆಗಳ ಸಂಖ್ಯೆ ಎಷ್ಟು: ಸದರಿ ಆಸ್ಪತ್ರೆಗಳಲ್ಲಿ<br>ಕಾರ್ಯನಿರ್ವಹಿಸುತ್ತಿರುವ ವೈದ್ಯರ ಮತ್ತು ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು:</td>
<td>ಕೊಡಗು ಜಿಲ್ಲೆಯಲ್ಲಿ ಕರ್ತವ್ಯನಿರ್ವಹಿಸುತ್ತಿರುವ ಪಶುವೈದ್ಯಕೀಯ ಸಂಸ್ಥೆಗಳ ವಿವರ ಕೆಳಕಂಡಂತಿದೆ.
<table>
<tr><th>ಕ್ರ.ಸಂ</th><th>ಸಂಸ್ಥೆಯ ಹೆಸರು</th><th>ಸಂಖ್ಯೆ</th></tr>
<tr><td>1.</td><td>ಜಿಲ್ಲಾ ಪಾಲಿಕ್ಲಿನಿಕ್</td><td>01</td></tr>
<tr><td>2.</td><td>ಪಶು ಆಸ್ಪತ್ರೆ</td><td>18</td></tr>
<tr><td>3.</td><td>ಪಶು ಚಿಕಿತ್ಸಾಲಯ</td><td>22</td></tr>
<tr><td>4.</td><td>ಪ್ರಾಥಮಿಕ ಪಶು ಚಿಕಿತ್ಸಾ ಕೇಂದ್ರ.</td><td>31</td></tr>
<tr><td></td><td>ಒಟ್ಟು</td><td>72</td></tr>
</table>
ಕೊಡಗು ಜಿಲ್ಲೆಯಲ್ಲಿನ ಪಶುವೈದ್ಯಕೀಯ ಸಂಸ್ಥೆಗಳಲ್ಲಿ 18 ಪಶುವೈದ್ಯರು ಕಾರ್ಯನಿರ್ವಹಿಸುತ್ತಿದ್ದು, 31 ಪಶುವೈದ್ಯರ ಹುದ್ದೆಗಳು ಖಾಲಿ ಇರುತ್ತವೆ.</td>
</tr>
<tr>
<td>ಇ</td>
<td>ಜಾನುವಾರುಗಳು, ಇತರೆ ಪ್ರಾಣಿಗಳ ಆರೈಕೆಗೆ ಹಾಗೂ ತುರ್ತು ಚಿಕಿತ್ಸೆಗಾಗಿ ತಾಲ್ಲೂಕುವಾರು ಕೈಗೊಂಡಿರುವ ಕ್ರಮಗಳಾವುವು?</td>
<td>ಪಶು ವೈದ್ಯಕೀಯ ಸಂಸ್ಥೆಗಳಲ್ಲಿ ಖಾಲಿ ಇರುವ ಪಶುವೈದ್ಯರ ಹುದ್ದೆಗಳಿಗೆ ಹಾಗೂ ಸಹಾಯಕ ಸಿಬ್ಬಂದಿ ಹುದ್ದೆಗಳಿಗೆ ಹತ್ತಿರದಲ್ಲಿರುವ ಪಶುವೈದ್ಯಕೀಯ ಸಂಸ್ಥೆಯಲ್ಲಿನ ಪಶುವೈದ್ಯರು ಹಾಗೂ ಸಹಾಯಕ ಸಿಬ್ಬಂದಿಗಳಿಗೆ ಅಧಿಕ ಪ್ರಭಾರ ವ್ಯವಸ್ಥೆ ಮಾಡಿ ರೈತರ ಜಾನುವಾರುಗಳಿಗೆ ಚಿಕಿತ್ಸೆಗೆ ನೀಡಲಾಗುತ್ತಿದೆ.<br><br>ಮಡಿಕೇರಿ, ವಿರಾಜಪೇಟೆ, ಸೋಮವಾರಪೇಟೆ ತಾಲ್ಲೂಕುಗಳಲ್ಲಿ ತಲಾ ಒಂದು ಹಾಗೂ ಕುಶಾಲನಗರದಲ್ಲಿ ಇಬ್ಬರು ಪಶುವೈದ್ಯರು ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿದ್ದಾರೆ.<br><br>ಪಶುಸಂಜೀವಿನಿ ಯೋಜನೆಯಡಿಯಲ್ಲಿ 5 ಸಂಚಾರಿ ಪಶು ಚಿಕಿತ್ಸಾ ಘಟಕಗಳ ಮೂಲಕ (1962 ಸಹಾಯವಾಣಿ) ಕೊಡಗು ಜಿಲ್ಲೆಯ ಮಡಿಕೇರಿ, ವಿರಾಜಪೇಟೆ, ಸೋಮವಾರಪೇಟೆ, ಪೊನ್ನಂಪೇಟೆ ಹಾಗೂ ಕುಶಾಲನಗರಗಳಲ್ಲಿ ರೈತರ ಮನೆ ಬಾಗಿಲಿಗೆ ತೆರಳಿ ಜಾನುವಾರುಗಳಿಗೆ ತುರ್ತು ಚಿಕಿತ್ಸೆ ಸೌಲಭ್ಯವನ್ನು ಒದಗಿಸಲಾಗುತ್ತಿದೆ</td>
</tr>
</table>

**(ಸಂಖ್ಯೆ: AHF/73/AID/2026)**

**(ಕೆ.ವೆಂಕಟೇಶ್)**
ಪಶುಸಂಗೋಪನೆ ಮತ್ತು ರೇಷ್ಮೆ ಇಲಾಖೆ ಸಚಿವರು.